ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್ ಜಡ್ಜ್‌ರ್ಯಾಯರ ಕೋರ್ಟ್‌ನಲ್ಲಿ—

1884ನೇ ಇಸವಿ ಅರ್ಜೀ ನಂಬರ್ 88.

ಮೃತಪಟ್ಟ ಬಾರಡ ಮುನಿಯಪ್ಪನ ಆಸ್ತಿ ವಿಷಯದಲ್ಲಿ—

ಅರ್ಜಿದಾರು ಮುನಿಯಪ್ಪ ಮೈನರ್ ಗಾರ್ಡಿಯರ್ ತಾಯಿ ಧೋಂಡುಬಾಯಿ, ಮೃತಪಟ್ಟ ಸದರೀ ಬಾರಡ ಮುನಿಯಪ್ಪನಿಗೆ ಮಗನು ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ಚನ್ನಯ್ಯನ ಪೇಟೆ ಸ್ಥಳದ ಮೈನರ್ ಮುನಿಯಪ್ಪನ ತಾಯಿ ಧೋಂಡುಬಾಯಿ ಡಿಟೋ ವಾಸಸ್ಥರಾಗಿ ಮೃತಪಟ್ಟ ಮುನಿಯಪ್ಪನವರ ಜೆಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಪ್ರೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಧೋಂಡುಬಾಯಿ ಅರ್ಜೀಯನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 31ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆಕಾಲದಲ್ಲಿ ಸದರೀ ಮೃತಪಟ್ಟ ಮುನಿಯಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೮೪ನೇ ಇಸವಿ ಅರ್ಜೀ ನಂಬರ್ 89.

ಮೃತಪಟ್ಟ ಬೆಂಣೆವಾಸುದೇವಯ್ಯನವರ ಆಸ್ತಿ ವಿಷಯದಲ್ಲಿ—

ಅರ್ಜಿದಾರು ಬೆಂಣೆ ಅನಂತೈಯನು, ಮೃತಪಟ್ಟ ಸದರಿ ಬೆಂಣೆವಾಸುದೇವಯ್ಯನವರಿಗೆ ತಮ್ಮನು ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಚಿಕ್ಕ ಪೇಟೆ ಸ್ಥಳದ ಬೆಂಣೆ ಅನಂತೈಯ್ಯನವರು ಡಿಟೋ ವಾಸಸ್ಥರಾಗಿ ಮೃತಪಟ್ಟ ವಾಸುದೇವಯ್ಯನವರ ಜೆಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಪ್ರೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಅನಂತಯ್ಯನವರ, ಅರ್ಜೀಯನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 31ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವಾಸುದೇವಯ್ಯನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 90.

ಮೃತಪಟ್ಟ ಪರ್ಷ ಅಮಲ್‌ದಾರ್ ಕೃಷ್ಣರಾಯರ ಆಸ್ತಿ ವಿಷಯದಲ್ಲಿ—

ಅರ್ಜಿದಾರು 1ನೇ ಸುಬ್ಬರಾವ್, 2ನೇ ಕೇಷಗಿರಿರಾವ್, 3ನೇ ಶ್ರೀನಿವಾಸರಾವ್, ಇವರಗಳು ಮೈನರ್ ಪೋಷಣೆಕರ್ತಳಾದ ಖಾಸಾ ತಾಯಿ ರುಕ್ಮಿಣಿಬಾಯಿ ಮೃತಪಟ್ಟ ಸದರೀ ಕೃಷ್ಣರಾಯರಿಗೆ ಮಕ್ಕಳು ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ಸ್ಥಳದ ಮೈನರಗಳ ತಾಯಿ ರುಕ್ಮಿಣಿಮ್ಮನು, ಡಿಟೋ ವಾಸಸ್ಥರಾಗಿ ಮೃತಪಟ್ಟ ಕೃಷ್ಣರಾಯರ ಜೆಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟ್ ಪ್ರೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ರುಕ್ಮಿಣಿಮ್ಮನವರ ಅರ್ಜೀಯನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 31ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕೃಷ್ಣರಾಯರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಜುಲೈ ತಿಂಗಳು 7ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1884ನೇ ಇಸವಿ ಜರ್ಜೀ ನಂಬರ್ 94.

ಮೃತಪಟ್ಟ ಪೋರಿಗಂಟಿ ಸುಬ್ಬಾಶಾಸ್ತ್ರಿ ಆಸ್ತಿ ವಿಷಯದಲ್ಲಿ—

ಅರ್ಜಿದಾರು ಕೋಲಾರದ ಕಸಬೇಲಿರುವ ಹೂತಕುಳದ ವೆರಾಂಭಟ್ಟರ ಕೊಮಾರ ಲಕ್ಷ್ಮೀಪತಯ್ಯನು, ಮೃತಪಟ್ಟಸದರಿ ಸುಬ್ಬಾಶಾಸ್ತ್ರಿಯರಿಗೆ ಮಾತಾಮಹಂದರು ಆಗಬೇಕೆಂಬ ಹಕ್ಕುದಾರೀ ಮೇಲೆ ಕೋಲಾರ ಕಸಬೆ ಸ್ಥಳದ ಲಕ್ಷ್ಮೀಪತಯ್ಯನವರು, ಡಿಟೋ ವಾಸ

ಸ್ಥರಾಗಿ ಮೃತಪಟ್ಟ ಸುಬ್ಬಾಶಾಸ್ತ್ರಿಗಳ ಜಿಂದಗಿ ಬಗ್ಯಾಗಿ ಬಗತಕ್ಕ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಲಕ್ಷ್ಮೀಪತಯ್ಯನವರ ಅರ್ಜಿಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 14ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸುಬ್ಬಾಶಾಸ್ತ್ರಿಯರ ಆಸ್ತಿಗೆ ಹಕ್ಕು ದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 95.

ಮೃತಪಟ್ಟ ಮುನೇಗೌಡ ವುರಫ್ ಪಿಲ್ಲಂಣಗೌಡನ ಆಸ್ತಿ ವಿಷಯದಲ್ಲಿ—

ಅರ್ಜೀದಾರ 1ನೇ ದೊಡ್ಡ ಮುನೇಗೌಡ, 2ನೇ ಚಿಕ್ಕ ಮುನೇಗೌಡ ಇವರುಗಳು ಮೈನರ್ ತಾಯಿ ಮುನಿನಾಗಮ್ಮ, ಮೃತಪಟ್ಟ ಸದರಿ ಪಿಲ್ಲಂಣಗೌಡರಿಗೆ ಮಕ್ಕಳು ವುತ್ತು ಹೆಂಡತಿ ಆಗಬೇಕೆಂಬ ಹಕ್ಕು ದಾವೆ ಮೇಲೆ ಬೆಂಗಳೂರು ಸ್ಥಳದ ಕೆಂಗೇರಿ ಹೋಬಳಿ ಬೈಯಂಡಪಾಳ್ಯ ದಲ್ಲಿರುವ ವಕ್ಕಲಿಗರ ಮುನಿನಾಗಮ್ಮ, ಡಿಟೋ ಗ್ರಾಮದ ವಾಸಸ್ಥರಾಗಿ ಮೃತಪಟ್ಟ ಪಿಲ್ಲಂಣಗೌಡರ ಜಿಂದಗಿ ಬಗ್ಯಾಗಿ ಬರತಕ್ಕ ಸೂಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮೈನರ್ ಹುಡಗರಿಗೆ ಖಾನಾತಾಯಿ ಮುನಿನಾಗಮ್ಮನ ಅರ್ಜಿಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 14ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪಿಲ್ಲಂಣಗೌಡರ ಆಸ್ತಿಗೆ ಹಕ್ಕು ದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಜುಲೈ ತಿಂಗಳು 11ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕ್ಯೋಸ್,
ಸಬ ಜಡ್ಜ.

ಬೆಂಗಳೂರು ಡಿಸ್ಟ್ರಿಕ್ಟು.

ತಾರೀಖು 1ನೇ ಜುಲೈ 1884.

ಬೆಂಗಳೂರಲ್ಲಿರತಕ್ಕ ಮೈಸೂರು ಗವರ್ಮೆಂಟ್ ಸೇವಿಂಗ್ಸ್ ಬ್ಯಾಂಕಿನ ಡಿಪಾಜಿಟೆದಾರ್ರಿಗೆ ಕೇಳಿ ಕೊಳ್ಳುವದೇನಂದರೆ, 1884ನೇ ಇಸವಿ ಮಾರ್ಚಿ 31ನೇ ಮರ್ಕುಂ ವರಿಗಿನ ಬಡ್ಡಿಯನ್ನು ಫೈಸಲ್ಮಾಡುವ ಬಗ್ಯಾಗಿ ಅವರವರ ಪ್ಯಾಸ್ ಬುಕ್ಕುಗಳನ್ನು ಬೆಂಗಳೂರು ಡಿಸ್ಟ್ರಿಕ್ಟು ಟ್ರೆಜರೀಯಲ್ಲಿ ಹಾಜರ್ಮಾಡತಕ್ಕದ್ದು.

ಎ. ರಂಗಸ್ವಾಮಯ್ಯಂಗಾರ್,
ಫಾರ್ ಟ್ರೆಜರಿ ಆಫೀಸರ್.

ತುಮಕೂರು ಡಿಸ್ಟ್ರಿಕ್ಟು.

ತಾರೀಖು 30ನೇ ಜೂನ್ 1884.

ಇದರಿಂದ ತಿಳಿಯಪಡಿಸುವದೇನಂದರೆ, ತುರ್ವೆಕೆರೆ ಸಬ್ ರಿಜಿಸ್ಟ್ರಿ ಆಫೀಸಿನಲ್ಲಿ ದೇವಾರಸಾಗಿ ಯಿರತಕ್ಕ ಈ ಕೆಳಗೆ ವಿವರಿಸೋಣ್ಣಾ ದಸ್ತಾವೇಜನ್ನ ಹಾಜರ್ ಮಾಡಿದವರೆ ಆಗಲಿ ಅಥವಾ ಮಾಪಸ್ ಪಡಿಯಲಿಕ್ಕೆ ಅವರಿಂದ ಕ್ರಮವಾದ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರರೆ ಆಗಲಿ ಈ ನೋಟೀಸ್ ತಾರೀಖು ಲಾಗಾಯತು ಎಂಟು ತಿಂಗಳ ವಳಗಾಗಿ ಡಿಟೋ ಸಬ್ ರಿಜಿಸ್ಟ್ರಾರವರ ರೂಬರೂ ಹಾಜರಾಗಿ ಆದನ್ನು ವಾಪಸ್ ತೆಗದುಕೊಳ್ಳಬೇಕು, ಇದಕ್ಕೆ ತಪ್ಪಿದರೆ ಸಣ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಅನುಸರಿಸಿ ಅದು ನಾಶಪಡಿಸಲ್ಪಡುವದು.